## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕೊಳ್ಳೇಗಾಲ

**ಸಿ ಸಿ ಸಂಖ್ಯೆ 781/2016**

ಚಾಸಾ 5 ಪ್ರಾಸಾ 5

ಸಾಕ್ಷಿಯ ಹೆಸರು : ಲಿಂಗಣ್ಣ

ತಂದೆಯ ಹೆಸರು : ಮರಿದೇವರು

ವಯಸ್ಸು : 65 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸ ಸ್ಥಳ : ಮಧುವನಹಳ್ಳಿ

ದಿನಾಂಕ 23.01.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ – ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ಆರೋಪಿಗಳು ಹಾಗೂ ಚಾಸಾ 1 ರಿಂದ ಚಾಸಾ 4 ನನಗೆ ಗೊತ್ತು. ಪ್ರಕರಣ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

ನಾನು ಸಾಮಾನ್ಯವಾಗಿ ದಾಖಲಾತಿಗಳಿಗೆ ಸಹಿ ಹಾಕುತ್ತೇನೆ. ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಮಹಜರ್ ಆಗಿದ್ದು ಅದನ್ನು ನಿಪಿಃ 3 ಎಂದು ಈಗಾಗಲೇ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ 3(ಸಿ) ಎಂದು ಗುರುತಿಸಲಾಯಿತು. ಈಗ್ಗೆ 7–8 ವರ್ಷದ ಹಿಂದೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೆ. ನಿಪಿ–3 ರಲ್ಲಿರುವ ಸಂಗತಿಗಳು ನನಗೆ ಗೊತ್ತಿಲ್ಲ. ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ಆ ದಿನ ನನ್ನ ಜೊತೆ ಚಾಸಾ 3 ಮತ್ತು ಚಾಸಾ 4 ರವರು ನಿಪಿ–3 ದಾಖಲೆಗೆ ಸಹಿ ಮಾಡಿದ್ದರು. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಸಮಕ್ಷಮ ಇರುವ ಮುದ್ದೇಮಾಲನ್ನು ನೋಡಿ ಗುರುತಿಸಿರುವುದಿಲ್ಲ.

(**ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಈ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಬೇಕೆಂದು ಮನವಿ ಮಾಡಿದ್ದು ಸದರಿ ಮನವಿಯನ್ನು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.**)

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿನಾಂಕಃ 27.01.2016 ರಂದು ಆರೋಪಿಗಳು, ಚಾಸಾ 1 ಮತ್ತು ಚಾಸಾ 2ರವರ ಮನೆಯ ನಡುವೆ ಇರುವ ಓಣಿಗೆ ಸಂಬಂಧಿಸಿದಂತೆ ಜಗಳ ಆಗಿದ್ದು ಆ ಸಮಯದಲ್ಲಿ ನಾನು ಸಹಿ ಮಾಡಿದ್ದೆ ಎಂದರೆ ಸರಿಯಲ್ಲ. ಆ ದಿನ ಚಾಸಾ 3ರವರು ಸ್ಥಳ ತೋರಿಸಿದ್ದರು ಎಂದರೆ ಸರಿಯಲ್ಲ. ಆ ದಿನ ಚಾಸಾ 3ರವರು ಹಾಜರು ಪಡಿಸಿದ ಮುದ್ದೇಮಾಲನ್ನು ಪೊಲೀಸರು ನನ್ನ ಸಮಕ್ಷಮ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ–3 ರಲ್ಲಿರುವ ಸಂಗತಿಗಳನ್ನು ಓದಿ ಹೇಳಿ, ಆ ನಂತರ ಚಾಸಾ 3, ಚಾಸಾ 5 ಹಾಗೂ ನಾನು ಸಹಿ ಮಾಡಿದ್ದೆವು ಎಂದರೆ ಸರಿಯಲ್ಲ. ಅದರಲ್ಲಿರುವ ಸಂಗತಿ ನನಗೆ ಗೊತ್ತು ಎಂದರೆ

ಸರಿಯಲ್ಲ. ಆ ದಿನ ಬೆಳಿಗ್ಗೆ 10.00 ರಿಂದ 11.00 ಗಂಟೆಗೆ ಮಹಜರ್ ಬರೆಯಾಲಯಿತು ಎಂದರೆ ಸರಿ. ನನಗೆ ಎಲ್ಲಾ ಸಂಗತಿ ಗೊತ್ತಿದ್ದರೂ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆಃ ಇರುವುದಿಲ್ಲ**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

(ಕಾವ್ಯಶ್ರೀ. ಎಂ )
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ., ಕೊಳ್ಳೇಗಾಲ.